ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 21-07-2017

## ಪತ್ರಿಕಾ ಆಮಂತ್ರಣ

**1. ಆರನೇ ಕರ್ನಾಟಕ ರಾಜ್ಯ ವೇತನ ಆಯೋಗದ ಪತ್ರಿಕಾಗೋಷ್ಠಿ:**

**ದಿನಾಂಕ: 22-07-2017 ರಂದು ಶನಿವಾರ ಸಮಯ: ಬೆಳಿಗ್ಗೆ 11-30 ಗಂಟೆಗೆ**

**ಸ್ಥಳ: 6ನೇ ಕರ್ನಾಟಕ ರಾಜ್ಯ ವೇತನ ಆಯೋಗ, 1ನೇ ಮಹಡಿ, ಕಾಫಿ ಮಂಡಳಿ ಕಟ್ಟಡ, ಅಂಬೇಡ್ಕರ್ ವೀಧಿ, ಬೆಂಗಳೂರು -560 001**

## ಪತ್ರಿಕಾ ಪ್ರಕಟಣೆ

# ಸಚಿವರ ಪ್ರವಾಸ

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ)

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಹಾಗೂ ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀಮತಿ ಉಮಾಶ್ರೀ ಅವರು ಜುಲೈ 21 ರಿಂದ 28 ರವರೆಗೆ ಬಾಗಲಕೋಟೆ ಹಾಗೂ ಧಾರವಾಡ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳುವರು.

# ಅಂತಿಮ ಆಯ್ಕೆ ಪಟ್ಟಿ ಪ್ರಕಟ

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗದ ಅಧಿಸೂಚನೆ 03–3–2016ರಲ್ಲಿ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿನ ನಿಲಯ ಮೇಲ್ವಿಚಾರಕರು (ಪುರುಷ) 175 (106+69 ಹೈ.ಕ) ಹುದ್ದೆಗಳ ಅಂತಿಮ ಆಯ್ಕೆಪಟ್ಟಿಯನ್ನು www.kpsc.kar.nic. ರಲ್ಲಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

## ಮಸಾಜ್ ಸೆಂಟರ್ ನೋಂದಾವಣೆ ಕಡ್ಡಾಯ

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಅನೇಕ ಮಸಾಜ್ ಸೆಂಟರ್‌ಗಳು ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮದ (ಕೆ.ಪಿ.ಎಂ.ಇ.) ಆಕ್ಟ್ 2007 ನಿಯಮ 2009 ರನ್ವಯ ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿದ್ದರೂ ನೋಂದಾವಣಿ ಮಾಡಿಕೊಳ್ಳದೇ ನಡೆಸುತ್ತಿರುವುದು ತಿಳಿದು ಬಂದಿರುತ್ತದೆ.

ಕೆ.ಪಿ.ಎಂ.ಇ. ಆಕ್ಟ್ 2007 ನಿಯಮ 2009 ರನ್ವಯ ಅನಧಿಕೃತವಾಗಿ ನಡೆಸಲಾಗುತ್ತಿರುವ ಮಸಾಜ್ ಸೆಂಟರ್‌ಗಳು ತಮ್ಮ ಸಂಸ್ಥೆಯನ್ನು ಕೂಡಲೇ ತಮ್ಮ ವ್ಯಾಪ್ತಿಗೊಳಪಡುವ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಲ್ಲಿ ನಿಯಮಾನುಸಾರ ನೋಂದಾವಣೆ ಮಾಡಿಕೊಳ್ಳುವುದು. ಹೆಚ್ಚಿನ ಮಾಹಿತಿಗಾಗಿ ಕೆಪಿಎಂಇ ಅಫೀಷಿಯಲ್ ವೆಬ್‌ಸೈಟ್‌ಗೆ ಲಾಗಿನ್ ಆಗಲು ನಿರ್ದೇಶಕರು, ಆಯುಷ್ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ

ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 23-07-2017ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀಮತಿ. ಗೌರಮ್ಮ ಮತ್ತು ತಂಡ, ಚನ್ನಪಟ್ಟಣ ರವರಿಂದ ಜಾನಪದ ಗೀತೆ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. ರಾಜು.ವಿ ಮತ್ತು ತಂಡ, ರಾಮನಗರ ರವರಿಂದ ಜಾನಪದ ಗೀತೆ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ ಕು: ಸಮುದ್ರಿಕ ಗೋಪಿನಾಥ್ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ, ಮಾಚೋಹಳ್ಳಿ, ಮಾಗಡಿ ರಸ್ತೆ , ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕೆ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

➢ ಬೆಳಿಗ್ಗೆ 6.00 ರಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಗ್ಲೆನ್ ಈಗಲ್ಸ್ ಗ್ಲೋಬಲ್ ಆಸ್ಪತ್ರೆ, ರಿಚ್ ಮಂಡ್ ರಸ್ತೆ ರವರಿಂದ ಉಚಿತ ಕಾರ್ಡಿಯಾಕ್ ಆರೋಗ್ಯ ತಪಾಸಣಾ ಶಿಬಿರ ಏರ್ಪಡಿಸಲಾಗಿದೆ.

# ಮೂಲ ದಾಖಲೆ ಅರ್ಹತಾ ಪಟ್ಟಿ ಪ್ರಕಟ

ಬೆಂಗಳೂರು, ಜುಲೈ 21 (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗದ ಅಧಿಸೂಚನೆ 03-3-2016ರಲ್ಲಿ ಅಧಿಸೂಚಿಸಿರುವ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಲ್ಲಿನ ಅಂಧ ಮಕ್ಕಳ ಶಾಲೆಯಲ್ಲಿ ಪದವೀಧರ ಸಹಾಯಕರು/ಶಿಕ್ಷಕರು 10 (06+04 ಹೈ.ಕ) ಹುದ್ದೆಗಳ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಹಾಗೂ ಅಧಿಸೂಚನೆ ದಿನಾಂಕ: 5-10-2016 ರಲ್ಲಿ ಮತ್ತು ಸೇರ್ಪಡೆ ಅಧಿಸೂಚನೆ ದಿನಾಂಕ 22-10-2016 ರಲ್ಲಿ ಅಧಿಸೂಚಿಸಲಾಗಿರುವ ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ಆರ್ಟ್ ಅಂಡ್ ಕ್ರಾಫ್ಟ್ ಶಿಕ್ಷಕರು -10 (07+03 ಹೈ.ಕ.) ಹುದ್ದೆಗಳು, ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ಕನ್ನಡ ಭಾಷಾ ಶಿಕ್ಷಕರು -31 (22+09 ಹೈ.ಕ.) ಹುದ್ದೆಗಳು ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಲ್ಲಿನ ಗೃಹಪಾಲಕ/ಗೃಹಪಾಲಕಿ- 26 ಹುದ್ದೆಗಳ 1:2 ಅನುಪಾತದಲ್ಲಿ ಮೂಲ ದಾಖಲೆಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ದಿ: 21-7-2017 ರಂದು ಆಯೋಗದ ವೆಬ್‌ಸೈಟ್ www.kpsc.kar.nic. ರಲ್ಲಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.